ಕರ್ನಾಟಕ ಸರ್ಕಾರ
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
2ನೇ ಮಹಡಿ, ಕೆ.ಹೆಚ್.ಬಿ ಕಾಂಪ್ಲೆಕ್ಸ್, ಕಾವೇರಿ ಭವನ, ಬೆಂಗಳೂರು-560 009
ದೂರವಾಣಿ: 080-22240627 ಫ್ಯಾಕ್ಸ್: 080-22233175 ಇ-ಮೇಲ್: rk3452000@gmail.com.

ಸಂಖ್ಯೆ: ಗ್ರಾಕುಪ 14 ಗ್ರಾನೀಸ(2)2015

ದಿನಾಂಕ 27.02.2015

## ವೀಡಿಯೋ ಸಂವಾದ ಕಾರ್ಯಕ್ರಮ

ವಿಷಯ: ರಾಜ್ಯದಾದ್ಯಂತ ಕುಡಿಯುವ ನೀರು ಮತ್ತು ನೈರ್ಮಲ್ಯ ಜಾಗೃತಿ ಸಪ್ತಾಹ ಆಚರಿಸುವ ಬಗ್ಗೆ ವೀಡಿಯೋ ಸಂವಾದದಲ್ಲಿ ಭಾಗವಹಿಸುವ ಕುರಿತು.

ಉಲ್ಲೇಖ: ಕೇಂದ್ರ ಸರ್ಕಾರ ಪತ್ರ ಸಂಖ್ಯೆ:WQ-11018/7/2015O/oJD(Stat),ದಿನಾಂಕ: 11.02.2015

-----

ಮೇಲ್ಕಂಡ ವಿಷಯ ಮತ್ತು ಉಲ್ಲೇಖಗಳಿಗೆ ಸಂಬಂಧಿಸಿದಂತೆ, ದಿನಾಂಕ 16.03.2015 ರಿಂದ 22.03.2015ರವರೆಗೆ ದೇಶದಾದ್ಯಂತ ನೀರು, ನೈರ್ಮಲ್ಯ ಜಾಗೃತಿಗೆ ಸಂಬಂಧಿಸಿದಂತೆ ಪ್ರತೀ ಗ್ರಾಮ ಪಂಚಾಯತಿ ವ್ಯಾಪ್ತಿಯ ಜನವಸತಿ ಪ್ರದೇಶದಲ್ಲಿ / ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ 7 ದಿನಗಳ ಸ್ವಚ್ಛ ಭಾರತ್ ಅಭಿಯಾನ ಹಾಗೂ ಸುರಕ್ಷಿತ ಕುಡಿಯುವ ನೀರಿನ ಬಗ್ಗೆ ಪ್ರಚಾರಾಂದೋಲನ ಕಾರ್ಯಕ್ರಮವನ್ನು ಆಯೋಜಿಸಬೇಕಾಗಿದೆ. ಈ ಕುರಿತು ದಿನಾಂಕ:02.03.2015 ಮಧ್ಯಾಹ್ನ 4.00 ಗಂಟೆಗೆ ವೀಡಿಯೋ ಸಂವಾದ ಕಾರ್ಯಕ್ರಮವನ್ನು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರ ಅಧ್ಯಕ್ಷತೆಯಲ್ಲಿ ಆಯೋಜಿಸಿದ್ದು, ತಾವುಗಳು ಈ ವೀಡಿಯೋ ಸಂವಾದದಲ್ಲಿ ತಪ್ಪದೇ ಭಾಗವಹಿಸಲು ಕೋರಿದೆ.

27/2/15

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
ಇಮೇಲ್: rk3452000@gmail.com
ಫೋನ್:22240627 ಫ್ಯಾಕ್ಸ್:22233175

ಇವರಿಗೆ:-

1. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳು
2. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
3. ಜಿಲ್ಲಾ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ
4. ಜಿಲ್ಲಾ ಆರೋಗ್ಯಾಧಿಕಾರಿಗಳು.
5. ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ.
6. ಜಿಲ್ಲಾ ಯುವಜನ ಸೇವಾ ಅಧಿಕಾರಿಗಳು.
7. ಕಾರ್ಯಪಾಲಕ ಅಭಿಯಂತರರು, ಕುಡಿಯುವ ನೀರು ಹಾಗೂ ನೈರ್ಮಲ್ಯ ಇಲಾಖೆ.
8. ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು.
9. ಜಿಲ್ಲಾ ನೀರು ಮತ್ತು ನೈರ್ಮಲ್ಯ ಘಟಕದಲ್ಲಿ ನೇಮಕವಾಗಿರುವ ಸಮಾಲೋಚಕರು.

ಪ್ರತಿಯನ್ನು:-

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮಾನ್ಯ ಸಚಿವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು ಮಾಹಿತಿಗಾಗಿ.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ಮಾಹಿತಿಗಾಗಿ.